ದಿನಾಂಕ 01.03.2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆಃ- ವಾದಿ ಪರ ವಕೀಲರಿಂದಃ-**

ನಾನು ಈ ದಾವೆಯಲ್ಲಿ ವಾದಿಯ ಜಿಪಿಎ ಹೋಲ್ಡರ್ ಆಗಿದ್ದು, ನನ್ನ ಮುಖ್ಯ ವಿಚಾರಣೆಯ ಪ್ರಮಾಣಪತ್ರವನ್ನು ಈ ದಿನ ನ್ಯಾಯಾಲಯದಲ್ಲಿ ಸಲ್ಲಿಸಿದ್ದು, ಅದರಲ್ಲಿರುವ ಅಂಶಗಳು ಸತ್ಯವಾಗಿದ್ದು, ಅದರಲ್ಲಿರುವ ಸಹಿ ನನ್ನದೇ ಆಗಿದೆ.

ಜಮಾಬಂಧಿಯ ದೃಢೀಕೃತ ನಕಲನ್ನು ಹಾಜರುಪಡಿಸುತ್ತಿದ್ದು, ಅದನ್ನು ನಿ.ಪಿ. 1 ಎಂದು, ಮಾಹಿತಿ ಹಕ್ಕು ಕಾಯಿದೆ ಅರ್ಜಿಯ ಸ್ವೀಕೃತಿಯನ್ನು ನಿ.ಪಿ. 2 ಎಂದು, ಸರ್ವೆ ನಕ್ಷೆಯನ್ನು ನಿ.ಪಿ. 3 ಎಂದು, ಜಿಲ್ಲಾಧಿಕಾರಿಯವರ ನಡವಳಿಯ ದೃಢೀಕೃತ ನಕಲನ್ನು ನಿ.ಪಿ. 4 ಎಂದು ಗುರುತಿಸಲಾಯಿತು.

ಕೋರಿಕೆಯ ಮೇರೆಗೆ ಪಾಟೀ ಸವಾಲಿಗೆ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿದಾರರ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸ ಇ

ಸಹಿಃ

ಹಿರಿಯ ಸಿವಿಲ್ ನ್ಯಾಯಾಧೀಶರು
ವಿರಾಜಪೇಟೆ.

(ಸಾಕ್ಷಿದಾರರ ಸಹಿ)